**ಓ.ಎಸ್ಃ 68/2018** **ಡಿಡಬ್ಲ್ಯೂ-1: ರಾಮಕೃಷ್ಣ**

ದಿನಾಂಕಃ 16.03.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋಧಿಸಲಾಯಿತು.

**ಪಾಟಿ ಸವಾಲುಃ ವಾದಿ ಪರ ಶ್ರೀ ಎಸ್.ವಿ. ವಕೀಲರಿಂದಃ**

ಐಟಂ ನಂ. 1ರ ದಾವಾ ಆಸ್ತಿಯನ್ನು 2018ರಲ್ಲಿ ನಾನು ಖರೀದಿಸಿರುತ್ತೇನೆ. ನಾನು ಚಾಮರಾಜನಗರ ಪಟ್ಟಣದಲ್ಲಿ ಸುಮಾರು ವರ್ಷದಿಂದ ಅಂಗಡಿ ಇಟ್ಟುಕೊಂಡು ವ್ಯಾಪಾರ ಮಾಡುತ್ತಿದ್ದೇನೆ ಎಂದರೆ ಸರಿ. 1ನೇ ಪ್ರತಿವಾದಿ ನನಗೆ 30 ವರ್ಷಗಳಿಂದ ಪರಿಚಯರಾಗಿರುತ್ತಾರೆ. ಮೊದಲು 1ನೇ ಪ್ರತಿವಾದಿ ಎಲೆಕ್ಟ್ರಾನಿಕ್ಸ್ ಸಾಮಾನುಗಳನ್ನು ರಿಪೇರಿ ಮಾಡುವ ಕೆಲಸ ಮಾಡುತ್ತಿದ್ದರು ಎಂದರೆ ಸರಿ. ವಾದಿಯರ ತಾಯಿ ಕಮಲಾಕ್ಷಮ್ಮರವರ ತವರು ಮನೆಯವರು ಆರ್ಥಿಕವಾಗಿ ಚೆನ್ನಾಗಿದ್ದಾರೆ ಎಂದರೆ ನನಗೆ ಗೊತ್ತಿಲ್ಲ. ನಾನು ಮತ್ತು 1ನೇ ಪ್ರತಿವಾದಿ ಚೆನ್ನಾಗಿದ್ದೇವೆ ಎಂದರೆ ಸರಿ. ಈಗಲೂ ನಾನು ಮತ್ತು 1ನೇ ಪ್ರತಿವಾದಿ ಸಂಪರ್ಕದಲ್ಲಿದ್ದೇವೆ ಎಂದರೆ ಸಾಕ್ಷಿಯು 5-6 ವರ್ಷಗಳಿಂದ ಸಂಪರ್ಕದಲ್ಲಿ ಇಲ್ಲ ಎಂದು ನುಡಿಯುತ್ತಾರೆ. ಐಟಂ ನಂ.1ರ ದಾವಾ ಆಸ್ತಿಯನ್ನು ಖರೀದಿಸುವ ಸಮಯದಲ್ಲಿ ಖರೀದಿ ಪತ್ರ ಮತ್ತು ವಿಭಾಗ ಪತ್ರವನ್ನು ಪರಿಶೀಲಿಸಿರುತ್ತೇನೆ. 1ನೇ ಪ್ರತಿವಾದಿಯ ಆದಾಯ ತೆರಿಗೆ ಇಲಾಖೆಯಲ್ಲಿ ಐಟಂ ನಂ.1ರ ದಾವಾ ಆಸ್ತಿಯನ್ನು ಘೋಷಣೆ ಮಾಡಿರುವ ಬಗ್ಗೆ ಪರಿಶೀಲಿಸಲು ನನಗೆ ತೊಂದರೆ ಇರಲಿಲ್ಲ ಎಂದರೆ ಸರಿ. ಐಟಂ ನಂ.1ರ ದಾವಾ ಆಸ್ತಿಯು ಖರೀದಿಸುವ ಸಮಯದಲ್ಲಿ 1ನೇ ಪ್ರತಿವಾದಿ ಮನೆಯವರನ್ನು ವಿಚಾರಿಸಿದ್ದೀರಾ ಎಂದರೆ ಸಾಕ್ಷಿಯು ಅವರ ತಂದೆಯನ್ನು ವಿಚಾರಿಸಿದಾಗ 1ನೇ ದಾವಾ ಆಸ್ತಿಯು 1ನೇ ಪ್ರತಿವಾದಿಯ ಸ್ವಯಾರ್ಜಿತ ಆಸ್ತಿ ಎಂದು ತಿಳಿಸಿರುತ್ತಾರೆ ಎಂದು ನುಡಿಯುತ್ತಾರೆ. 1ನೇ ಪ್ರತಿವಾದಿಯ ತಂದೆಯನ್ನು ವಿಚಾರಿಸಿದ ಬಗ್ಗೆ ಕ್ರಯ ಪತ್ರದಲ್ಲಿ ಅವರ ಸಹಿಯನ್ನು ಪಡೆದುಕೊಳ್ಳಲು ತೊಂದರೆ ಇರಲಿಲ್ಲ ಎಂದರೆ ಸಾಕ್ಷಿಯು 1ನೇ ಪ್ರತಿವಾದಿ 1ನೇ ದಾವಾ ಆಸ್ತಿಯನ್ನು

ಆತನ ಸ್ವಯಾರ್ಜಿತ ಆಸ್ತಿಯಾಗಿದ್ದು ಆತನ ಸಹಿ ಮಾತ್ರ ಸಾಕು ಎಂದು ತಿಳಿಸಿದ್ದರಿಂದ ಅವರ ತಂದೆಯ ಸಹಿಯನ್ನು ಪಡೆದುಕೊಂಡಿಲ್ಲ ಎಂದು ಹೇಳುತ್ತಾರೆ. ನಾನು 1ನೇ ಪ್ರತಿವಾದಿಯ ತಂದೆಯನ್ನು ವಿಚಾರಿಸಿಲ್ಲ ಎಂದರೆ ಸರಿಯಲ್ಲ.

1ನೇ ಪ್ರತಿವಾದಿಯ ಕುಟುಂಬದವರಿಗೆ ಚಾಮರಾಜನಗರದಲ್ಲಿ ಬೇರೆ–ಬೇರೆ ಕಡೆ ಒಟ್ಟು ಕುಟುಂಬದ ಆಸ್ತಿಗಳು ಇವೆ ಎಂದರೆ ನನಗೆ ಗೊತ್ತಿಲ್ಲ. 1ನೇ ಪ್ರತಿವಾದಿ ಐಟಂ ನಂ. 1ರ ದಾವಾ ಆಸ್ತಿಯನ್ನು ಒಟ್ಟು ಕುಟುಂಬದ ಆದಾಯದಿಂದ ಖರೀದಿಸಿರುತ್ತಾರೆ ಎಂದರೆ ಸರಿಯಲ್ಲ. 1ನೇ ಪ್ರತಿವಾದಿಗೆ ಐಟಂ ನಂ.1ರ ದಾವಾ ಆಸ್ತಿಯನ್ನು ಖರೀದಿ ಮಾಡುವಷ್ಟು ಆರ್ಥಿಕ ಸಾಮರ್ಥ್ಯ ಇರಲಿಲ್ಲ ಎಂದರೆ ಸರಿಯಲ್ಲ. 1ನೇ ಪ್ರತಿವಾದಿ ವಾದಿಯ ತಾಯಿಯ ಆಭರಣಗಳನ್ನು ಅಡಮಾನ ಇಟ್ಟು ಐಟಂ ನಂ.1ರ ದಾವಾ ಆಸ್ತಿಯನ್ನು ಖರೀದಿ ಮಾಡಿರುತ್ತಾರೆ ಎಂದರೆ ಸಾಕ್ಷಿಯು 1ನೇ ಪ್ರತಿವಾದಿ ನಿಮಿಷಾಂಬ ಎಂಟರ್ ಪ್ರೈಸಸ್ ಎಂಬ ಸಂಸ್ಥೆಯನ್ನು ನಡೆಸುತ್ತಿದ್ದು ಅದರ ಆದಾಯದಿಂದ ಐಟಂ ನಂ.1ರ ದಾವಾ ಆಸ್ತಿಯನ್ನು ಖರೀದಿ ಮಾಡಿರುತ್ತೇನೆ ಎಂದು ತಿಳಿಸಿದ್ದರು ಎಂದು ನುಡಿಯುತ್ತಾರೆ. 1ನೇ ಪ್ರತಿವಾದಿ ನಿಮಿಷಾಂಬ ಎಂಟರ್ ಪ್ರೈಸಸ್ ಎಂಬ ಸಂಸ್ಥೆಯನ್ನು ನಡೆಸುತ್ತಿದ್ದ ಬಗ್ಗೆ ದಾಖಲೆಯನ್ನು ಹಾಜರುಪಡಿಸಿಲ್ಲ ಎಂದರೆ ಸರಿ. ಐಟಂ ನಂ. 1ರ ದಾವಾ ಆಸ್ತಿಯಲ್ಲಿ ವಾದಿಗೆ ಭಾಗಾಂಶದ ಹಕ್ಕು ಇದೆ ಎಂದರೆ ಸರಿಯಲ್ಲ. ವಾದಿಯ ತಾಯಿ ಐಟಂ ನಂ.1ರ ದಾವಾ ಆಸ್ತಿಯಲ್ಲಿ ಭಾಗಾಂಶ ಕೇಳಿದ್ದರಿಂದ ನಾನು ಮತ್ತು 1ನೇ ಪ್ರತಿವಾದಿ ಸೇರಿ ಕ್ರಯ ಪತ್ರವನ್ನು ಸೃಷ್ಠಿ ಮಾಡಿರುತ್ತೇವೆ ಎಂದರೆ ಸರಿಯಲ್ಲ. ಐಟಂ ನಂ.1ರ ದಾವಾ ಆಸ್ತಿಯು ಒಟ್ಟು ಕುಟುಂಬದ ಆಸ್ತಿ ಎಂದರೆ ಸರಿಯಲ್ಲ. ವಾದಿಗಳಿಗೆ ಐಟಂ ನಂ.1ರ ದಾವಾ ಆಸ್ತಿಯಲ್ಲಿ ಭಾಗಾಂಶ ನೀಡಬೇಕಾಗುತ್ತದೆ ಎಂದು ಸದರಿ ಆಸ್ತಿಯು 1ನೇ ಪ್ರತಿವಾದಿಯ ಸ್ವಯಾರ್ಜಿತ ಆಸ್ತಿ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಐಟಂ ನಂ. 1ರ ದಾವಾ ಆಸ್ತಿಯು ಒಟ್ಟು ಕುಟುಂಬದ ಆಸ್ತಿ ಎಂದು ನನಗೆ ತಿಳಿದಿದ್ದರೂ ಸಹ ವಾದಿಗೆ

ಮೋಸ ಮಾಡುವ ಸಲುವಾಗಿ ನ್ಯಾಯಾಲಯದಲ್ಲಿ ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ** : ಇಲ್ಲ.

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇ ಸರಿ ಇದೆ

1ನೇ ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ. ಚಾಮರಾಜನಗರ.